ಬೆಂಗಳೂರು ಮೆಟ್ರೋ ರೈಲು ನಿಗಮ ನಿಯಮಿತ
BANGALORE METRO RAIL CORPORATION LIMITED

ಬಿಎಂಆರ್‌ಸಿಎಲ್/ಸಿಪಿಆರ್‌ಓ/ಮಾಧ್ಯಮ ಪ್ರಕಟಣೆ/2023-24 ದಿನಾಂಕ 01/12/2023

# ಮಾಧ್ಯಮ ಪ್ರಕಟಣೆ

**ವಿಷಯ: T-20 ಕ್ರಿಕೆಟ್ ಪಂದ್ಯದ ಪ್ರಯುಕ್ತ 3ನೇ ಡಿಸೆಂಬರ್, 2023 (ಭಾನುವಾರ) ರಂದು ಮೆಟ್ರೋ ರೈಲು ಸೇವೆಗಳ ವಿಸ್ತರಣೆ.**

ದಿನಾಂಕ 3ನೇ ಡಿಸೆಂಬರ್, 2023 ರಂದು ಬೆಂಗಳೂರಿನಲ್ಲಿ ನಡೆಯಲಿರುವ T-20 ಕ್ರಿಕೆಟ್ ಪಂದ್ಯದ ಪ್ರಯುಕ್ತ, ನಿಗಮವು ನೇರಳೆ ಮತ್ತು ಹಸಿರು ಮಾರ್ಗಗಳಲ್ಲಿರುವ ನಾಲ್ಕು ಟರ್ಮಿನಲ್ ಮೆಟ್ರೋ ನಿಲ್ದಾಣಗಳಿಂದ ಹೊರಡುವ ರೈಲು ಸೇವೆಗಳನ್ನು ರಾತ್ರಿ 11.45 ರವರೆಗೆ ವಿಸ್ತರಿಸಿದೆ.

ಅಲ್ಲದೆ, ರಿಟರ್ನ್ ಜರ್ನಿ ಪೇಪರ್ ಟಿಕೆಟ್ ಎಲ್ಲಾ ಮೆಟ್ರೋ ನಿಲ್ದಾಣಗಳಲ್ಲಿ 3ನೇ ಡಿಸೆಂಬರ್ 2023 ರಂದು ಮಧ್ಯಾಹ್ನ 2.00 ಗಂಟೆಯಿಂದ ಮಾರಾಟಕ್ಕೆ ಲಭ್ಯವಿರುತ್ತದೆ. ಸದರಿ ಪೇಪರ್ ಟಿಕೆಟ್‌ಗಳು ರಾತ್ರಿ 8.00 ಗಂಟೆಯಿಂದ, ಕಬ್ಬನ್ ಪಾರ್ಕ್ ಮತ್ತು ಎಂ.ಜಿ ರಸ್ತೆ ಮೆಟ್ರೋ ನಿಲ್ದಾಣದಿಂದ ಯಾವುದೇ ಇತರ ಮೆಟ್ರೋ ನಿಲ್ದಾಣಕ್ಕೆ ದಿನದ ವಿಸ್ತೃತ ಅವಧಿಯಲ್ಲಿ ಒಂದು ಪ್ರಯಾಣಕ್ಕೆ ಮಾತ್ರ ಸೀಮಿತ ವಾಗಿರುತ್ತದೆ.

ಪೇಪರ್ ಟಿಕೆಟ್ ದರ ರೂ. 50/- ಜೊತೆಗೆ, ಕ್ಯೂಆರ್ ಕೋಡ್ ಟಿಕೆಟ್‌ಗಳು ಸಾಮಾನ್ಯ ದರದ ಶೇ5% ರಿಯಾಯಿತಿಯೊಂದಿಗೆ ಪಂದ್ಯದ ದಿನದಂದು ಖರೀದಿಸಿದರೆ ಇಡೀ ದಿನಕ್ಕೆ ಮಾನ್ಯವಾಗಿರುತ್ತದೆ. ಅನುಕೂಲಕರ ಪ್ರಯಾಣಕ್ಕೆ, ಕ್ರಿಕೆಟ್ ಪಂದ್ಯದ ಪ್ರಾರಂಭದ ಮೊದಲು ವ್ಯಾಟ್ಸ್ ಆ್ಯಪ್ / ನಮ್ಮ ಮೆಟ್ರೋ ಆಪ್ / ಪೇ ಟಿಎಂ ಆಪ್ ನಲ್ಲಿ ಕ್ಯೂಆರ್ ಟಿಕೆಟ್‌ಗಳನ್ನು ಖರೀದಿಸಲು ಪ್ರಯಾಣಿಕರಿಗೆ ಸೂಚಿಸಲಾಗಿದೆ. ಸ್ಮಾರ್ಟ್ ಕಾರ್ಡ್ ಮತ್ತು NCMC ಕಾರ್ಡ್ ಗಳನ್ನು ಸಹ ಎಂದಿನಂತೆ ಬಳಸಬಹುದು.

ವಿಸ್ತೃತ ಸಮಯದಲ್ಲಿ ಕಬ್ಬನ್ ಪಾರ್ಕ್ ಮತ್ತು ಎಂ.ಜಿ ರಸ್ತೆ ಮೆಟ್ರೋ ನಿಲ್ದಾಣಗಳಲ್ಲಿ ಕ್ಯೂಆರ್ ಟಿಕೆಟ್‌ಗಳು, ಸ್ಮಾರ್ಟ್ ಕಾರ್ಡ್‌ಗಳು, ಮತ್ತು ಪೇಪರ್ ಟಿಕೆಟ್‌ಗಳನ್ನು ಮಾತ್ರ ಅನುಮತಿಸಲಾಗಿದೆ.

ಕಬ್ಬನ್ ಪಾರ್ಕ್ ಮತ್ತು ಎಂ.ಜಿ ರಸ್ತೆ ಮೆಟ್ರೋ ನಿಲ್ದಾಣಗಳಲ್ಲಿ ಟಿಕೆಟ್ ಕೌಂಟರ್‌ಗಳಲ್ಲಿ ಟಿಕೆಟ್ ಖರೀದಿ ಜನಸಂದಣಿಯನ್ನು ತಪ್ಪಿಸಲು, ಪ್ರಯಾಣಿಕರು ಮೇಲಿನ ಸೌಲಭ್ಯವನ್ನು ಬಳಸಿಕೊಳ್ಳುವಂತೆ ಕೋರಿದೆ.

**ಸಹಿ/-**
**ಮುಖ್ಯ ಸಾರ್ವಜನಿಕ ಸಂಪರ್ಕಾಧಿಕಾರಿ**

Phone: +91-(0)80-22969300 / 22969301, Fax: +91-(0)80-22969222,
E-mail: bmrcl@dataone.in Web: www.bmrc.co.in, CIN No.: U16286KA1994GOI016286